147

# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1417
2. ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 20.03.2025
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸಿವಿಲ್ ಸೇವೆಯಲ್ಲಿನ ವಿವಿಧ ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಖಾಯಂ ಪೂರ್ವ ಸೇವಾವಧಿ ಘೋಷಣೆ/ ಸ್ವಯಂಚಾಲಿತ ವೇತನ ಬಡ್ತಿ/ ಇತರೆ ಸಮಯದಲ್ಲಿ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಆದೇಶಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಹಾಗಿದ್ದಲ್ಲಿ, ವ್ಯವಸ್ಥಿತವಾಗಿ ಹಾಗೂ ಸಮರ್ಪಕವಾಗಿ ವಾರ್ಷಿಕ 3 ಕಾರ್ಯನಿರ್ವಹಣಾ ವರದಿಗಳನ್ನು ನಿರ್ವಹಿಸದೇ ಇರುವುದರಿಂದ ಸಮಯೋಚಿತವಾಗಿ ಸಲ್ಲಿಸಲು ಕಷ್ಟಸಾಧ್ಯವಾಗುತ್ತಿರುವ ಕಾರಣ ಕೆಲವೊಂದು ಇಲಾಖಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳ ವಿಶೇಷ ವರದಿ ದೃಢೀಕರಣವನ್ನು ಪರಿಗಣಿಸುತ್ತಿರುವ ಕುರಿತು ಸರ್ಕಾರದ ನಿಲುವೇನು; | ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000 ರ ನಿಯಮ 7A ರಲ್ಲಿ, ರಾಜ್ಯ ಸರ್ಕಾರಿ ನೌಕರನ ಯಾವುದೇ ಅವಧಿಗೆ ಸಂಬಂಧಿಸಿದಂತೆ ಕಾರ್ಯನಿರ್ವಹಣಾ ವರದಿಯು ಲಭ್ಯವಿಲ್ಲದಿದ್ದರೆ, ನೇಮಕಾತಿ ಪ್ರಾಧಿಕಾರ ಇಚ್ಛಿಸಿದಲ್ಲಿ, ಕಾರ್ಯನಿರ್ವಹಣಾ ವರದಿಯು ಲಭ್ಯವಿಲ್ಲದಿದ್ದ ಅವಧಿಗೆ ಸಂಬಂಧಿಸಿದಂತೆ ಕಾರಣಗಳನ್ನು ದಾಖಲಿಸಿ ಸದರಿ ಸಾಲುಗಳಿಗೆ ಸಂಬಂಧಿಸಿದಂತೆ 'ವಿಶೇಷ ವರದಿ'ಯನ್ನು ನೀಡುವಂತೆ ಸಂಬಂಧಿಸಿದ ವರದಿ, ಪುನರಾವಲೋಕನ ಮತ್ತು ಅಂಗೀಕಾರ ಪ್ರಾಧಿಕಾರಕ್ಕೆ ನಿರ್ದೇಶನ ನೀಡಬಹುದೆಂದು ಉಪಬಂಧಿಸಲಾಗಿದೆ.<br><br>ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000ರನ್ವಯ ಪ್ರಕ್ರಿಯೆಗಳನ್ನು ಅನುಸರಿಸಿ ವಿಶೇಷ ವರದಿಯನ್ನು ನೀಡಲಾಗಿದೆಯೇ ಎಂಬುದನ್ನು ಪರಿಶೀಲಿಸಿ ತದನಂತರ ಸಂಬಂಧಿಸಿದ ಪ್ರಾಧಿಕಾರಗಳು ವಿಶೇಷ ವರದಿಯನ್ನು ಪರಿಗಣಿಸುವ ಬಗ್ಗೆ ನಿರ್ಧರಿಸಬೇಕಾಗುತ್ತದೆ. |
| ಇ) | ವಿಶೇಷ ವರದಿ ಪರಿಗಣಿಸುವುದಾದಲ್ಲಿ, ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆಯೇ; ಯಾವ ರೀತಿ ನಿರ್ದೇಶನ ನೀಡಲಾಗಿದೆ; ವಿಶೇಷ ವರದಿ ಪರಿಗಣಿಸದೇ ಇದ್ದಲ್ಲಿ ಕಾರಣಗಳೇನು; (ಮಾಹಿತಿ ನೀಡುವುದು) | |
| ಈ) | ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆಯಾ ವರ್ಷದಲ್ಲಿ ಬರೆಯುವ ಮತ್ತು ನಿರ್ವಹಿಸುವ ಕುರಿತು ಸರ್ಕಾರದ | ವಾರ್ಷಿಕ ಕಾರ್ಯನಿರ್ವಹಣಾ ವರದಿಯನ್ನು ರಾಜ್ಯ ಸಿವಿಲ್ ಸೇವೆಯ ಗ್ರೂಪ್-ಎ, ಬಿ, ಸಿ ವೃಂದದ ಪ್ರತಿಯೊಬ್ಬ ನೌಕರನು ನಿಯಮಗಳಲ್ಲಿ |

| | |
|---|---|
| ಆದೇಶಗಳಿದ್ದಾಗ್ಯೂ ಸಹ ಸಮಯೋಚಿತವಾಗಿ ನಿರ್ವಹಣೆ ಮಾಡುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ವ್ಯವಸ್ಥಿತವಾಗಿ ನಿರ್ವಹಣೆ ಮಾಡದೇ ಇದ್ದಲ್ಲಿ, ಕಾರಣಗಳೇನು; ಅಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಮಾಹಿತಿ ನೀಡುವುದು) | ನಿಗದಿಪಡಿಸಿರುವ ಅವಧಿಯೊಳಗೆ ಕಡ್ಡಾಯವಾಗಿ ಸೃಜಿಸಬೇಕಿರುತ್ತದೆ ಮತ್ತು ಸದರಿ ನೌಕರನು ವರದಿ/ಪರಿಶೀಲನಾ/ಅಂಗೀಕಾರ ಪ್ರಾಧಿಕಾರವಾಗಿದ್ದಲ್ಲಿ ನಿಯಮಗಳಲ್ಲಿ ನಿಗದಿಪಡಿಸಿರುವ ಅವಧಿಯೊಳಗೆ ಕಡ್ಡಾಯವಾಗಿ ತಾನು ಯಾರಿಗೆ ವರದಿ/ಪರಿಶೀಲನಾ/ಅಂಗೀಕಾರ ಪ್ರಾಧಿಕಾರವಾಗಿರುತ್ತಾನೊ ಅಂತಹ ನೌಕರರ ವರದಿಯನ್ನು ಬರೆಯಬೇಕಿರುತ್ತದೆ.<br><br>ಹಾಗೆಯೇ, ಎಲ್ಲಾ ವರದಿ ಪ್ರಾಧಿಕಾರಗಳು ವರದಿ ವರ್ಷದಲ್ಲಿ ಯಾರಿಗೆ ವರದಿ ಪ್ರಾಧಿಕಾರವಾಗಿರುತ್ತಾರೋ ಅಂತಹ ಎಲ್ಲಾ ಸರ್ಕಾರಿ ನೌಕರರ ಕಾರ್ಯ ನಿರ್ವಹಣಾ ವರದಿಗಳನ್ನು ಬರೆದಿರುವುದಾಗಿ ದೃಢೀಕರಣವನ್ನು ಅವರವರ ಕಾರ್ಯ ನಿರ್ವಹಣಾ ವರದಿಗಳಲ್ಲಿ ನೀಡಬೇಕಾಗುತ್ತದೆ. ಅನ್ಯಥಾ ಅಂತಹ ಪ್ರಾಧಿಕಾರಿ, ವರದಿ ಪ್ರಾಧಿಕಾರವಾಗಿ ಕರ್ತವ್ಯ ನಿರ್ವಹಿಸುವಲ್ಲಿ ವಿಫಲರಾಗಿರುತ್ತಾರೆ ಎಂಬ ಪ್ರತಿಕೂಲ ಷರಾವನ್ನು ಅಂತಹ ವರದಿ ಪ್ರಾಧಿಕಾರದ ಕಾರ್ಯ ನಿರ್ವಹಣಾ ವರದಿಯಲ್ಲಿ ಪರಿಶೀಲನಾ ಪ್ರಾಧಿಕಾರಿ ದಾಖಲಿಸುವ ಅವಕಾಶವಿರುತ್ತದೆ. |

ಸಂಖ್ಯೆ: ಸಿಆಸುಇ 26 ಸೇವನೇ 2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ